ಈ) ಸಂಸ್ಥೆಯ ಸ್ವಂತ ಕಟ್ಟಡ ನಿರ್ಮಾಣದ ಸಲುವಾಗಿ ಬೇಲೂರು ತಾಲ್ಲೂಕು ಬಿಟ್ಟರವಳ್ಳಿ ಗ್ರಾಮ ಸರ್ವೆ ನಂ.5 ರಲ್ಲಿ 5 ಎಕರೆ ಸರ್ಕಾರಿ ಜಮೀನು ಸ್ವಾಧೀನಕ್ಕೆ ಪಡೆದುಕೊಂಡಿದ್ದು, ನೀಲಿ ನಕ್ಷೆ ಮತ್ತು ಅಂದಾಜು ಪಟ್ಟಿಯನ್ನು ಲೋಕೋಪಯೋಗಿ ಇಲಾಖೆಯಿಂದ ಪಡೆದು ಅನುದಾನದ ಲಭ್ಯತೆ ಆಧಾರದ ಮೇಲೆ ಕಟ್ಟಡ ನಿರ್ಮಾಣ ಕಾರ್ಯ ಪ್ರಾರಂಭಿಸಲಾಗುವುದು.

ಶಿಲಾ ಶಾಸನ

22 (40) ಶ್ರೀ ರುದ್ರೇಶ ಗೌಡ ವೈ.ಎನ್. (ಬೇಲೂರು): ಮಾನ್ಯ ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೇಲೂರು ತಾಲ್ಲೂಕಿನ ಹಲ್ಮಿಡಿ ಗ್ರಾಮದಲ್ಲಿ ಕನ್ನಡದ ಮೊದಲ ಶಿಲಾ ಶಾಸನ ದೊರೆತಿರುವುದು ನಿಜವೇ;

ಆ) ಹಾಗಿದ್ದಲ್ಲಿ ಶಾಸನ ದೊರೆತ ಗ್ರಾಮದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯ ನಡೆಸಿಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ ಇದಕ್ಕೆ ಕಾರಣವೇನು?

ಶ್ರೀ ಗೋವಿಂದ ಎಂ. ಕಾರಜೋಳ (ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಸಚಿವರು):

ಅ) ಹೌದು

ಆ) ಮೂಲ ಹಲ್ಮಿಡಿ ಶಿಲಾ ಶಾಸನವನ್ನು ಸರ್ಕಾರಿ ವಸ್ತು ಸಂಗ್ರಹಾಲಯ, ಬೆಂಗಳೂರು ಇಲ್ಲಿ ಸಂರಕ್ಷಿಸಲಾಗಿದೆ. ಅದರ ಪ್ರತಿಕೃತಿಯನ್ನು ಹಲ್ಮಿಡಿ ಗ್ರಾಮದಲ್ಲಿ ಇಡಲಾಗಿದೆ.

ಯಾವುದೇ ಗ್ರಾಮಗಳ ಅಭಿವೃದ್ಧಿ ಕಾರ್ಯವು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವ್ಯಾಪ್ತಿಗೆ ಬರುವುದಿಲ್ಲ.

ಇ) ಉದ್ಭವಿಸುವುದಿಲ್ಲ

ಏತ ನೀರಾವರಿ ಯೋಜನೆ

23 (41) ಶ್ರೀ ರುದ್ರೇಶ ಗೌಡ ವೈ. ಎನ್ (ಬೇಲೂರು): ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?